# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ–166 ಕರೀಸಂದ್ರ, ವಾರ್ಡ್ ಕಛೇರಿ, ಬೆಂಗಳೂರು.

**ದಿನಾಂಕ: 16.07.2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:–***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಪ್ರಕಾಶ್. ಎನ್. ಎಸ್ – ಸಹಾಯಕ ಅಭಿಯಂತರರು (ವಾರ್ಡ್ 166 ಕರೀಸಂದ್ರ)
3. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್) (ವಾರ್ಡ್ 166 ಕರೀಸಂದ್ರ)
4. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
5. ಶ್ರೀ. ಕಲ್ಯಾಣ್ – ಕಿ.ಆ.ಪ (ಹೊರಗುತ್ತಿಗೆ ಆಧಾರದ ಮೇಲೆ) ವಾರ್ಡ್ 166 ಕರೀಸಂದ್ರ)
6. ಶ್ರೀ. ದಿನೇಶ್ – ಕಂದಾಯ ಪರಿವೀಕ್ಷಕರು – (ವಾರ್ಡ್ 166 ಕರೀಸಂದ್ರ)
7. ಘನತ್ಯಾಜ್ಯ ವಿಲೇವಾರಿ ಸೂಪರ್‌ವೈಸರ್‌ಗಳು – (ವಾರ್ಡ್ 166 ಕರೀಸಂದ್ರ)
8. ಶ್ರೀ. ಸೈಯ್ಯದ್ – ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್ಎಸ್‌ಬಿ
9. 7ನೇ ಬ್ಲಾಕ್ ಜಯನಗರ ಮತ್ತು ಬನಶಂಕರಿ 2ನೇ ಹಂತದ ನಿವಾಸಿಗಳ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

*********

ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಿದ್ದ ಸಮಿತಿ ಸದಸ್ಯರು ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು. ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಈ ಹಿಂದಿನ ಸಭೆಯಲ್ಲಿ ಕಾರ್ಯಗತಗೊಳ್ಳದ ಕೆಲಸಕಾರ್ಯಗಳನ್ನು ವಿವರಿಸಿದ್ದು, ಸಂಬಂಧಪಟ್ಟ ಅಧಿಕಾರಿಗಳು ನಿಗಧಿತ ಅವಧಿಯೊಳಗೆ ಕಡ್ಡಾಯವಾಗಿ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿ ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

**1. ಕೋವಿಡ್–19 ಸಂಬಂಧ ಸೋಂಕು ಹರಡುವುದನ್ನು ತಡೆಗಟ್ಟುವ ಮುಂಜಾಗ್ರತಾ ಕ್ರಮಗಳ ಬಗ್ಗೆ.**

ಅಂಬೇಡ್ಕರ್‌ನಗರ, ಕಾವೇರಿನಗರ, ಪಾರ್ಕ್‌ಗಳ ಹತ್ತಿರ ಇರುವ ಕೊಳಚೆ ಪ್ರದೇಶಗಳಲ್ಲಿ ಹಾಗೂ 4ನೇ ಅಡ್ಡರಸ್ತೆ & 30ನೇ ಅಡ್ಡರಸ್ತೆ, ಜಯನಗರ 7ನೇ ಬ್ಲಾಕ್‌ನಲ್ಲಿ ನಿಲ್ಲುವ ಕಸದ ಲಾರಿ ಹತ್ತಿರ ನೀರು ನಿಲ್ಲುವಂತಹ ಜಾಗಗಳ ಸುತ್ತಮುತ್ತಲಿನ ಪ್ರದೇಶಗಳಿಗೆ ಜರೂರಾಗಿ ಔಷಧಿ ಸಿಂಪಡಣೆಗೆ ಆದೇಶಿಸಲಾಯಿತು.

**ಕ್ರಮ: ಆರೋಗ್ಯಾಧಿಕಾರಿಗಳು (ಪದ್ಮನಾಭನಗರ)**

**2. ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೊಲೀಸ್ ಇಲಾಖೆಗೆ ಸಂಬಂಧಿಸಿದ ವಿಷಯಗಳ ಬಗ್ಗೆ.**

- ವಾರ್ಡ್–166ರ ಸುತ್ತಮುತ್ತಲು ಪಾದಚಾರಿ ಮಾರ್ಗಗಳ ಮೇಲೆ ಸಣ್ಣ–ಪುಟ್ಟ ಅಂಗಡಿಗಳು ತೆರೆದಿದ್ದು ವಾಹನ ನಿಲುಗಡೆಯಿಂದಾಗಿ ಸಾರ್ವಜನಿಕರಿಗೆ ಪಾದಚಾರಿ ಮಾರ್ಗದಲ್ಲಿ ಓಡಾಡಲು ತೊಂದರೆಯುಂಟಾಗಿದ್ದು, ವಾಹನ ಸಂಚಾರಕ್ಕೆ ಅಡ್ಡಿಪಡಿಸಿರುವುದಾಗಿ ಸಾರ್ವಜನಿಕರು ತಿಳಿಸಿದರು.

**ಪು.ತಿ.ನೋ**

- ಬನಶಂಕರಿ ಸ್ಮಶಾನಗಳಲ್ಲಿ ಕೆಲವು ಕಿಡಿಗೇಡಿಗಳು ಮದ್ಯಪಾನ ಹಾಗೂ ಗಾಂಜ ಸೇವನೆ ಮಾಡುತ್ತಿರುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲು ಸಾರ್ವಜನಿಕರು ತಿಳಿಸಿದರು. ಸದರಿ ಪ್ರದೇಶದ ಸುತ್ತಮುತ್ತಲು ವಿದ್ಯುತ್ ಸಂಪರ್ಕ ಹಾಗೂ ಸಿ.ಸಿ.ಟಿ.ವಿ ಅಳವಡಿಸುವುದು ಅವಶ್ಯಕತೆ ಇರುವುದಾಗಿ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮಕೈಗೊಳ್ಳವಂತೆ ಸೂಚಿಸಲಾಯಿತು.
- ಬೆಂಗಳೂರು ಇಂಟರ್‌ನ್ಯಾಷನಲ್ ಶಾಲೆ ಹತ್ತಿರ ಟ್ರಾಫಿಕ್ ಜಾಮ್ ಉಂಟಾಗುತ್ತಿರುವ ಹಿನ್ನಲೆಯಲ್ಲಿ ಸೂಕ್ತ ಪರಿಹಾರ ರೂಪಿಸುವಂತೆ ಸಾರ್ವಜನಿಕರು ಕೋರಿದರು.
- ವಾರ್ಡ್ ವ್ಯಾಪ್ತಿಯ ಟಿಪ್ಪು ವೃತ್ತ, 24ನೇ ಎ ಅಡ್ಡರಸ್ತೆ, ಉರ್ದು ಶಾಲೆಯ ಬಳಿ ಹಾಗೂ ಕಾವೇರಿನಗರ 3ನೇ ಅಡ್ಡರಸ್ತೆಗಳಲ್ಲಿ ಹಲವು ದಿನಗಳಿಂದ ನಿಂತಿರುವ ವಾಹನಗಳನ್ನು ತೆರವುಗೊಳಿಸಿ ಟ್ರಾಫಿಕ್ ಸಮಸ್ಯೆಯನ್ನು ಕಡಿಮೆಗೊಳಿಸಬೇಕೆಂದು ಸಾರ್ವಜನಿಕರು ಕೋರಿದರು.

**ಕ್ರಮ: ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಟ್ರಾಫಿಕ್ ಪೋಲೀಸ್ /**
**ಸ.ಅ ವಾ–166/ಸ.ಕಾ.ನಿ.ಅ (ಬನಶಂಕರಿ),/ ಆರೋಗ್ಯಾಧಿಕಾರಿಗಳು(ಪದ್ಮನಾಭನಗರ)**
**ಕಾ.ಪಾ.ಅ/ಸ.ಕಾ.ನಿ.ಅ(ಯೋಜನೆ–ದಕ್ಷಿಣ) & (ವಿದ್ಯುತ್–ದಕ್ಷಿಣ) ಬಿಬಿಎಂಪಿ**

3. **ವಾರ್ಡ್ ವ್ಯಾಪ್ತಿಯಲ್ಲಿ ಕುಡಿಯುವ ನೀರು ಹಾಗೂ ಒಳಚರಂಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ.**

- ಸಾರ್ವಜನಿಕರು ಜಯನಗರ 7ನೇ ಬ್ಲಾಕ್‌ನ 1ನೇ ಅಡ್ಡರಸ್ತೆಯಿಂದ 4ನೇ ಅಡ್ಡರಸ್ತೆವರೆಗೆ ಹಾಗೂ ಕಾವೇರಿನಗರದಲ್ಲಿ ಮ್ಯಾನ್‌ಹೋಲ್‌ಗಳ ಸಮಸ್ಯೆಗಳನ್ನು ತಿಳಿಸಿದರು. ಸದರಿ ಕಾಮಗಾರಿ ಪ್ರಗತಿಯಲ್ಲಿರುವುದಾಗಿ ಈ ಬಗ್ಗೆ ಸೂಕ್ತ ಕ್ರಮವಹಿಸಲು ಸೂಚಿಸಲಾಯಿತು.

**ಕ್ರಮ: ಸ.ಅ & ಸ.ಕಾ.ನಿ.ಅ (ಬಿಡಬ್ಲ್ಯೂಎಸ್‌ಎಸ್‌ಬಿ)**

4. **ವಾರ್ಡ್‌ನಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಬಗ್ಗೆ.**

- ಬನಶಂಕರಿ 2ನೇ ಹಂತದಲ್ಲಿರುವ **ಹಿಂದು ರುದ್ರಭೂಮಿಯಲ್ಲಿ ಹೆಚ್ಚು ಕಸ ಸಂಗ್ರಹಣೆಯಾಗಿರುವುದನ್ನು** ಹಾಗೂ **ಯಾವುದೇ ವಿದ್ಯತ್ ಸಂಪರ್ಕವು ಇಲ್ಲದೇ ಇರುವುದನ್ನು** ಪರಿಶೀಲನಾ ಸಮಯದಲ್ಲಿ ಕಂಡುಬಂದಿದ್ದು, **ವಾರ್ಡ್–166ರ ಕಿರಿಯ ಆರೋಗ್ಯ ಪರಿವೀಕ್ಷಕರು ಸೂಕ್ತ ಪರಿಶೀಲಿಸಿ ವಾರಕ್ಕೊಮ್ಮೆ ಕಡ್ಡಾಯವಾಗಿ ಸ್ವಚ್ಚತೆಗೊಳಿಸಲು ಹಾಗೂ ಸೂಕ್ತ ವಿದ್ಯುತ್ ವ್ಯವಸ್ಥೆ ಕಲ್ಪಿಸಲು ಸೂಚಿಸಲಾಯಿತು.**
- ಎನ್.ಎಸ್.ವಿ.ಕೆ ಶಾಲೆಯ ಮೇಲ್ಛಾವಣಿಯಲ್ಲಿ ತ್ಯಾಜ್ಯ ಶೇಖರಣೆಯಾಗಿರುವುದರಿಂದ ಸೊಳ್ಳೆಗಳು ಹೆಚ್ಚಾಗುತ್ತಿರುವುದಾಗಿ ಸಾರ್ವಜನಿಕರು ತಿಳಿಸಿರುವ ಹಿನ್ನಲೆಯಲ್ಲಿ, **ವಾರ್ಡ್–166ರ ಹಿರಿಯ ಆರೋಗ್ಯ ಪರಿವೀಕ್ಷಕರು ಸೂಕ್ತ ಪರಿಶೀಲಿಸಿ ಸಂಬಂಧಪಟ್ಟವರಿಗೆ ಕೂಡಲೇ** ತ್ಯಾಜ್ಯವನ್ನು ತೆರವುಗೊಳಿಸಲು ಔಷಧ ಸಿಂಪಡನೆ ಮಾಡಿ **ಸ್ವಚ್ಚತೆ ಕಾಪಾಡಲು ಸೂಚಿಸುವಂತೆ ತಿಳಿಸಲಾಯಿತು.**
- ವಾರ್ಡ್ ವ್ಯಾಪ್ತಿಯಲ್ಲಿ **ಒಣತ್ಯಾಜ್ಯ ವಿಲೇವಾರಿ** ಸರಿಯಾಗಿ ನಿರ್ವಹಿಸಲಾಗುತ್ತಿಲ್ಲವೆಂದು ಸಾರ್ವಜನಿಕರು ತಿಳಿಸಿದರು. ಪ್ರಸ್ತುತ **ಒಣತ್ಯಾಜ್ಯ ವಿಲೇವಾರಿ** ಟೆಂಡರ್ ಬೇರೊಬ್ಬರ ಹೆಸರಿನಲ್ಲಿ ಗುತ್ತಿಗೆ ನೀಡಲಾಗಿರುವುದು ಕಂಡುಬಂದಿದ್ದು, ಸದರಿ ಹಳೆಯ ಗುತ್ತಿಗೆದಾರರಿಗೆ ತೆರವುಗೊಳಿಸಿ ಸದರಿ ಘಟಕವನ್ನು ಬಿಟ್ಟುಕೊಡಲು **ವಾರ್ಡ್–166ರ ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ಸೂಕ್ತ ಪರಿಶೀಲಿಸಿ ಸಂಬಂಧಪಟ್ಟವರಿಗೆ ಕೂಡಲೇ** ಅಗತ್ಯ ಕ್ರಮಕೈಗೊಳ್ಳುವಂತೆ ಸೂಚಿಸಲಾಯಿತು.

**ಕ್ರಮ: ಸ.ಕಾ.ನಿ.ಅ (ಘನತ್ಯಾಜ್ಯ) ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು**

5. **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ.**

- ವಾರ್ಡ್ ವ್ಯಾಪ್ತಿಯಲ್ಲಿಯ ಎಲ್ಲಾ ಕೆಲಸ ಕಾರ್ಯಗಳು ಹಾಗೂ ಕಾಮಗಾರಿಗಳು ಆಗಿಂದಾಗ್ಗೆ ಸಮರ್ಪಕವಾಗಿ ನೆರವೇರಿಸಲಾಗುತ್ತಿರುತ್ತದೆ ಎಂದು 7ನೇ ಬ್ಲಾಕ್ ಜಯನಗರ ಮತ್ತು ಬನಶಂಕರಿ 2ನೇ ಹಂತದ ನಿವಾಸಿಗಳ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಪಧಾಧಿಕಾರಿಗಳು ಹಾಗೂ ಸಾರ್ವಜನಿಕರು ಪ್ರಶಂಸೆ ವ್ಯಕ್ತಪಡಿಸಿದರು.

**ಪು.ತಿ.ನೋ**

- ಜಯನಗರ 7ನೇ ಬ್ಲಾಕ್‌ನ 1ನೇ ಎ ಮುಖ್ಯರಸ್ತೆ ಹಾಗೂ 3ನೇ ಅಡ್ಡರಸ್ತೆಗಳಲ್ಲಿ ಡೆಬ್ರಿಸ್‌ಗಳು ಇರುತ್ತದೆ. ಸದರಿ ಡೆಬ್ರಿಸ್ ನ್ನು ತೆರವುಗೊಳಿಸಿಕೊಡಲು ಕೋರಿದರು. **ವಾರ್ಡ್–166ರ ಸಹಾಯಕ ಅಭಿಯಂತರು** ಸಿಲ್ಟ್ ಟ್ರಾಕ್ಟರ್‌ಗಳು ಪ್ರತಿ ದಿನ ರಸ್ತೆವಾರು ಪರಿಶೀಲಿಸಿ ಆದ್ಯತೆ ಮೇರೆಗೆ ಕಾರ್ಯನಿರ್ವಹಿಸುತ್ತಿರುವ ಬಗ್ಗೆ ಧೃಡಪಡಿಸಿಕೊಂಡು ನಿರ್ವಹಿಸಲು ಸೂಚಿಸಲಾಯಿತು.

**ಕ್ರಮ: ಸ.ಕಾ.ನಿ.ಅ(ಘನತ್ಯಾಜ್ಯ ವಿಲೇವಾರಿ)/ಸ..ಅ ವಾರ್ಡ್ ಸಂಖ್ಯೆ 166.**

6. <u>ಇನ್ನಿತರೆ ವಿಷಯಗಳು ಅಧ್ಯಕ್ಷರ ಸೂಚನೆಯಂತೆ.</u>

- 6ನೇ ಅಡ್ಡರಸ್ತೆ, 7ನೇ ಅಡ್ಡರಸ್ತೆ, 8ನೇ ಅಡ್ಡರಸ್ತೆ ಮತ್ತು 11ನೇ ಅಡ್ಡರಸ್ತೆಗಳಲ್ಲಿ ಹಾಗೂ ಮನೆಗಳ ಛಾವಣಿಗಳಿಗೆ ಆವರಿಸಿಕೊಂಡಿರುವ ಮರದ ರೆಂಬೆ ಕೊಂಬೆಗಳನ್ನು ತೆರವುಗೊಳಿಸಲು ಹಲವಾರು ಬಾರಿ ಸೂಚಿಸಿದ್ದರೂ ಸಹ ಇದುವರೆಗೂ ಕ್ರಮ ಕೈಗೊಂಡಿರುವುದಿಲ್ಲ ಎಂದು ಸಾರ್ವಜನಿಕರು ದೂರು ನೀಡಿದರು.

**ಕ್ರಮ: ಅರಣ್ಯ ಅಧಿಕಾರಿ (ದಕ್ಷಿಣ–ಬಿಬಿಎಂಪಿ)**

- ಜಯನಗರ 7ನೇ ಬ್ಲಾಕ್‌ನ 1ನೇ ಎ ಮುಖ್ಯರಸ್ತೆಯಲ್ಲಿ ಬೀದಿ ದೀಪಗಳು ನಿರ್ವಹಿಸುತ್ತಿರುವುದಿಲ್ಲ. ಹಾಗಾಗಿ ಸದರಿ ಬೀದಿ ದೀಪಗಳನ್ನು ಸರಿಪಡಿಸಿಕೊಡಲು ಸಾರ್ವಜನಿಕರು ಕೋರಿದರು.
- ವಾರ್ಡ್ ವ್ಯಾಪ್ತಿಯ ಉಮಾಮಹೇಶ್ವರಿ ದೇವಸ್ಥಾನದ ಬಳಿ ಇರುವ ವಿದ್ಯುತ್ ಟ್ರಾನ್ಸ್‌ಫಾರ್ಮರ್‌ನಿಂದ ಪಾದಚಾರಿಗಳಿಗೆ ತೊದರೆಯುಂಟಾಗುತ್ತಿರುವುದರಿಂದ ತೆರವುಗೊಳಿಸುವಂತೆ ಸಾರ್ವಜನಿಕರು ಕೋರಿದರು.

**ಕ್ರಮ: ಸಹಾಯಕ ಅಭಿಯಂತರರು (ಬೆಸ್ಕಾಂ)**

ಮೇಲಿನಂತೆ ಎಲ್ಲಾ ವಿಷಯದ ಬಗ್ಗೆ ಕೂಲಂಕುಷವಾಗಿ ಚರ್ಚಿಸಲಾಗಿದ್ದು, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಲಾಯಿತು. ಹಾಗೂ ಮುಂದಿನ ಸಭೆಯ ದಿನಾಂಕದೊಳಗೆ ಎಲ್ಲಾ ಸಂಬಂಧಪಟ್ಟ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ವಾರ್ಡ್ ಸಮಿತಿ ಸಂಚಾಲಕರು<br>ವಾರ್ಡ್ ಸಂಖ್ಯೆ 166 | ನೋಡೆಲ್ ಅಧಿಕಾರಿ<br>ವಾರ್ಡ್ ಸಂಖ್ಯೆ 166 |




